ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ತುಮಕೂರು.

ದೂರವಾಣಿ: 0816-2273724
ಪಿ.ಡಬ್ಲ್ಯೂ.ಡಿ. ಕ್ವಾಟ್ರರ್ಸ್ ಮುಂಭಾಗ,
ಈದ್ಗಾ ಮೊಹಲ್ಲಾ ಮುಖ್ಯರಸ್ತೆ,
ತುಮಕೂರು-572101.

ಜಿಲ್ಲಾ ಪಂಚಾಯತ್, ತುಮಕೂರು.

website:https://dom.karnataka.gov.in/tumakuru E-mail:domtumkur@gmail.com

ಸಂಖ್ಯೆ:ಅಸಂಕಇ/ತು/ಅ.ಕಾ.ತ/ಸಿಆರ್-03/2021-22 ದಿನಾಂಕ:05/07/2021

# ಪ್ರಕಟಣೆ

ವಿಷಯ: 2021-22ನೇ ಸಾಲಿನಲ್ಲಿ ಮತೀಯ ಅಲ್ಪಸಂಖ್ಯಾತರ ಕಾನೂನು ಪದವೀಧರರಿಗೆ ತರಬೇತಿ ನೀಡುವ ಬಗ್ಗೆ.

--*****--

ಕಾನೂನು ವೃತ್ತಿಯಲ್ಲಿ (ವಕೀಲ ವೃತ್ತಿ) ತರಬೇತಿ ಪಡೆಯಲು ಇಚ್ಛೆಯುಳ್ಳ ತುಮಕೂರು ಜಿಲ್ಲೆಯ ಮತೀಯ ಅಲ್ಪಸಂಖ್ಯಾತರ ಕಾನೂನು ಪದವೀಧರರಿಂದ 2021-22ನೇ ಸಾಲಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಮತೀಯ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ (ಮುಸ್ಲಿಂ, ಕ್ರಿಶ್ಚಿಯನ್, ಬೌದ್ಧರು, ಜೈನರು, ಪಾರ್ಸಿ, ಸಿಖ್) ಕಾನೂನು ಪದವೀಧರರು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿಯನ್ನು ತುಮಕೂರು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಕಛೇರಿ ವೇಳೆಯಲ್ಲಿ ಉಚಿತವಾಗಿ ಪಡೆಯಬಹುದು. ಪೂರ್ಣ ದಾಖಲಾತಿಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:19/07/2021ರ ಒಳಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪಿ.ಡಬ್ಲ್ಯೂ.ಡಿ. ಕ್ವಾಟ್ರರ್ಸ್ ಮುಂಭಾಗ, ಈದ್ಗಾ ಮೊಹಲ್ಲಾ ಮುಖ್ಯರಸ್ತೆ, ತುಮಕೂರು-572101. ಈ ವಿಳಾಸಕ್ಕೆ ತಲುಪುವಂತೆ ಸಲ್ಲಿಸಬೇಕು.

ನಿಬಂಧನೆಗಳು:

1. ಕಾನೂನು ಪದವಿ ಪರೀಕ್ಷೆಯನ್ನು ಪಾಸು ಮಾಡಿದ ಮತೀಯ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ ಅಭ್ಯರ್ಥಿಯಾಗಿರಬೇಕು. ಹಾಗೂ ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ 2 ವರ್ಷಗಳ ಅವಧಿಯೊಳಗೆ ಕಾನೂನು ಪದವಿಯ ಪರೀಕ್ಷೆಯನ್ನು ಪಾಸು ಮಾಡಿರುವ ಅಭ್ಯರ್ಥಿಗಳು ಮಾತ್ರ ತರಬೇತಿಗೆ ಅರ್ಜಿ ಸಲ್ಲಿಸಲು ಅರ್ಹತೆ ಹೊಂದಿರುತ್ತಾರೆ ಹಾಗೂ ಬಾರ್ ಕೌನ್ಸಿಲ್‌ನಲ್ಲಿ ಹೆಸರನ್ನು ನೋಂದಾಯಿಸಿರಬೇಕು.
2. ಸರ್ಕಾರಿ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30/02/2002 ರಲ್ಲಿ ವರ್ಗೀಕರಣ ಮಾಡಿರುವ ಪ್ರಕಾರ ಅಲ್ಪಸಂಖ್ಯಾತರ ಅಭ್ಯರ್ಥಿಗಳಾಗಿರಬೇಕು. ಮತ್ತು ಸರ್ಕಾರದ ಆದೇಶ ಸಂಖ್ಯೆ:ಸಕಇ 222 ಬಿಸಿಎ 04, ದಿನಾಂಕ:20/09/2004 ರ ಆದೇಶದಲ್ಲಿ ಸರ್ಕಾರವು ನಿಗದಿಪಡಿಸಿರುವ ನಮೂನೆಗಳಲ್ಲಿ ಜಾತಿ ಹಾಗೂ ಆದಾಯ ಪ್ರಮಾಣಪತ್ರಗಳನ್ನು ಸಲ್ಲಿಸಬೇಕು ಮತ್ತು ಕುಟುಂಬದ ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ.3,50,000/-ಗಳನ್ನು ಮೀರಬಾರದು.
3. ತರಬೇತಿಗೆ 05 ಅಭ್ಯರ್ಥಿಗಳನ್ನು ಆಯ್ಕೆ ಸಮಿತಿಯ ಮೂಲಕ ಆಯ್ಕೆ ಮಾಡಲಾಗುವುದು.
4. ತರಬೇತಿ ಅವಧಿ 4 ವರ್ಷಗಳಾಗಿದ್ದು, ತರಬೇತಿಯ ಅವಧಿಯಲ್ಲಿ ತರಬೇತಿದಾರರಿಗೆ ಮಾಹೆಯಾನ ರೂ.5,000/- ರಂತೆ ತರಬೇತಿ ಭತ್ಯೆ ನೀಡಲಾಗುವುದು.
5. ಈ ಸೌಲಭ್ಯ ಪಡೆಯಲಿಚ್ಛಿಸುವ ಮತೀಯ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ ಅಭ್ಯರ್ಥಿಗಳ ವಯೋಮಿತಿ 30 ವರ್ಷ ಮೀರಿರಬಾರದು.
6. ಆಯ್ಕೆಯಾದ ಅಭ್ಯರ್ಥಿಯು ಸುಳ್ಳು ಜಾತಿ ಆದಾಯ ಪ್ರಮಾಣಪತ್ರ ನೀಡಿ ಆಯ್ಕೆಯಾಗಿರುವುದು ಕಂಡು ಬಂದಲ್ಲಿ ಶಿಕ್ಷೆಗೆ ಗುರಿಪಡಿಸಿ, ಸ್ಟೈಫಂಡ್ ನೀಡಿರುವ ಒಟ್ಟು ಹಣದ ಜೊತೆಗೆ ಶೇ.10 ಬಡ್ಡಿ ಸೇರಿಸಿ ಭೂಕಂದಾಯ ಬಾಕಿ ರೂಪದಲ್ಲಿ ವಸೂಲಿ ಮಾಡಲಾಗುವುದು.

-2-

7. ಆಯ್ಕೆಯಾದ ಅಭ್ಯರ್ಥಿಗಳನ್ನು ಸರ್ಕಾರಿ ವಕೀಲರು/ಸಾರ್ವಜನಿಕ ಅಭಿಯೋಜಕರು ಅಥವಾ ಕನಿಷ್ಠ 20 ವರ್ಷ ವಕೀಲವೃತ್ತಿ ಮಾಡಿರುವ ವಕೀಲರ ಬಳಿ ತರಬೇತಿ ಪಡೆಯಲು ನಿಯೋಜಿಸಲಾಗುವುದು. ತರಬೇತಿ ಪಡೆದ ಬಗ್ಗೆ ಪ್ರತಿ ತಿಂಗಳ ದಿನಚರಿಗಳನ್ನು ಈ ಕಛೇರಿಗೆ ಸಲ್ಲಿಸಬೇಕು.
8. ತರಬೇತಿಗೆ ಆಯ್ಕೆಗೊಂಡು ತರಬೇತಿ ಅವಧಿಯ ಮಧ್ಯದಲ್ಲಿ ತರಬೇತಿ ಬಿಡುವಂತಿಲ್ಲ (ಖಾಯಂ ಸರ್ಕಾರಿ ನೌಕರಿಗೆ ಸೇರಿದ ಪ್ರಸಂಗವನ್ನು ಹೊರತುಪಡಿಸಿ) ಮಧ್ಯದಲ್ಲಿ ಬಿಟ್ಟಲ್ಲಿ ಅವರುಗಳ ಶಿಷ್ಯವೇತನವನ್ನು ಸರ್ಕಾರಕ್ಕೆ ಮರುಪಾವತಿಸಬೇಕು. ತಪ್ಪಿದಲ್ಲಿ ಕಂದಾಯದ ಬಾಕಿ ಎಂದು ಹಣ ವಸೂಲಿ ಮಾಡಲಾಗುವುದು.
9. ಸದಸ್ಯ ಕಾರ್ಯದರ್ಶಿಯವರು ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲನೆ ಮಾಡಿ ಅಪೂರ್ಣ ಮಾಹಿತಿ ಹೊಂದಿರುವ ಹಾಗೂ ಕೇಳಿರುವ ಮಾಹಿತಿಯನ್ನು ಅರ್ಜಿ ಸಂಗಡ ಒದಗಿಸದ ಮತ್ತು ಅವಧಿ ಮೀರಿ ಬಂದ ಅರ್ಜಿಗಳನ್ನು ಯಾವುದೇ ಕಾರಣ ನೀಡದೆ ತಿರಸ್ಕರಿಸಲಾಗುವುದು.

ಜಿಲ್ಲಾ ಅಧಿಕಾರಿ,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ತುಮಕೂರು.

ಪ್ರತಿಯನ್ನು:

1. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಜಿಲ್ಲಾಧಿಕಾರಿಗಳು, ತುಮಕೂರು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ತುಮಕೂರು, ಕಛೇರಿಯ ಸೂಚನಾ ಫಲಕಕ್ಕೆ ಪ್ರಕಟಣೆ ನೀಡಲು ಕೋರಿದೆ.
3. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ತುಮಕೂರು, ಇವರಿಗೆ ಕಳುಹಿಸುತ್ತಾ ಸ್ಥಳೀಯ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಕೋರಿದೆ.
4. ಅಧ್ಯಕ್ಷರು, ಕಾರ್ಯದರ್ಶಿ, ಬಾರ್ ಕೌನ್ಸಿಲ್, ತುಮಕೂರು, ಇವರಿಗೆ ಮಾಹಿತಿಗಾಗಿ ಕಳುಹಿಸುತ್ತಾ ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಲಾಗಿದೆ.
5. ಸಂಪಾದಕರು, ಕರ್ನಾಟಕ ಗೆಜೆಟ್ ಪತ್ರಿಕೆ, ಬೆಂಗಳೂರು ಮುದ್ರಣಾಲಯ, ಇವರಿಗೆ ಸಲ್ಲಿಸುತ್ತಾ ಮೇಲ್ಕಂಡ ಪ್ರಕಟಣೆಯನ್ನು ಕರ್ನಾಟಕ ಗೆಜೆಟ್‌ನಲ್ಲಿ ಉಚಿತವಾಗಿ ಪ್ರಕಟಿಸಲು ಕೋರಿದೆ. ಪ್ರಕಟಣೆ ನೀಡಿದ ಬಗ್ಗೆ ಈ ಕಛೇರಿಗೆ ಮಾಹಿತಿಗಾಗಿ ಕಳುಹಿಸಲು ಕೋರಿದೆ.
6. ಸಂಬಂಧಪಟ್ಟ ಜಿಲ್ಲೆಯ ಎಲ್ಲಾ ಕಾನೂನು ಕಾಲೇಜಿನ ಪ್ರಾಂಶುಪಾಲರುಗಳ ಮಾಹಿತಿಗಾಗಿ ಹಾಗೂ ಮೇಲ್ಕಂಡ ಪ್ರಕಟಣೆಯನ್ನು ತಮ್ಮ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
7. ಕಛೇರಿ ಪ್ರತಿ.